# ಕರ್ನಾಟಕ ಸರ್ಕಾರ
# ಜಿಲ್ಲಾ ಪಂಚಾಯತ್ ರಾಮನಗರ
# (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

ಸಂಖ್ಯೆ: ಉನಿರಾ/ಮಮಅ/ಅಂಕಾಸಆಯ್ಕೆ/Online/2017-18

ಉಪನಿರ್ದೇಶಕರ ಕಛೇರಿ
ಪಂಚಾಯತ್ ಭವನ, 2ನೇ ಮಹಡಿ
ಬಿ.ಎಂ ರಸ್ತೆ, ರಾಮನಗರ ಜಿಲ್ಲೆ,
ದಿನಾಂಕ: 20-02-2018

## ಅಧಿಸೂಚನೆ

ರಾಮನಗರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 5 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 40 ಅಂಗನವಾಡಿ ಕಾರ್ಯಕರ್ತೆ ಮತ್ತು 77 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಬದ ದಿನಾಂಕ | 23-02-2018 ಬೆಳಿಗ್ಗ 10.00 ಗಂಟೆಯಿಂದೆ |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 20-03-2018 ಸಂಜೆ 5.30 ಗಂಟೆಯ |
| ವೆಬ್ ಸೈಟ್ ವಿಳಾಸ | http://anganwadirecruit.kar.nic.in |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ರಾಮನಗರ ಜಿಲ್ಲೆ, ರಾಮನಗರ.

ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ್ ರಾಮನಗರ

(ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

ಸಂಖ್ಯೆ: ಉನಿರಾ/ಮಮಅ/ಅಂಕಾಸಆಯ್ಕೆ/Online/2017-18

ಉಪನಿರ್ದೇಶಕರ ಕಛೇರಿ
ಪಂಚಾಯತ್ ಭವನ, 2ನೇ ಮಹಡಿ
ಬಿ.ಎಂ ರಸ್ತೆ, ರಾಮನಗರ ಜಿಲ್ಲೆ,
ದಿನಾಂಕ: 20-02-2018

ವಿಷಯ: ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಮಮಇ/303/ಐಸಿಡಿ/2017, ದಿನಾಂಕ:23.09.2017.

*****

ರಾಮನಗರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 5 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವ ಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮಿಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳಿಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:20-03-2018 ಸಂಜೆ 5.30 ಗಂಟೆಯೊಳಗೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

## ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1. ಭರ್ತಿ ಮಾಡಿದ ಅರ್ಜಿ ನಮೂನೆ (ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ
3. ತಹಶೀಲ್ದಾರ್‌ರು/ಉಪತಹಶೀಲ್ದಾರ್‌ರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ 10 ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 10ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು)
5. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಸಹಾಯಕಿ ಹುದ್ದೆಗೆ 9 ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 9ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು)

6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
9. ಅಂಗವಿಕಲತೆ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.50 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) (ಅಂಗನವಾಡಿ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
10. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲದಿಂದ ಪಡೆದಿರಬೇಕು)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದಲ್ಲಿ, ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ರಾಮನಗರ ಜಿಲ್ಲೆ, ರಾಮನಗರ.

ಪ್ರತಿಯನ್ನು:
1. ಜಂಟಿ ನಿರ್ದೇಶಕರು (ಐಸಿಡಿಎಸ್) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
2. ಎನ್.ಐ.ಸಿ ರಾಮನಗರ ಜಿಲ್ಲೆ ರವರ ಮಾಹಿತಿಗಾಗಿ.
3. ಕಛೇರಿ ಕಡತಕ್ಕೆ.

# HELP DESK

## CONTACT FOR REQUIRED DETAILS

| SL NO | CDPO OFFICE NAME | CONTACT NUMBER |
|---|---|---|
| 1 | RAMANAGARA | 08027273912 |
| 2 | CHANNAPATNA | 08027254891 |
| 3 | MAGADI | 08027745431 |
| 4 | KANAKAPURA | 08027522282 |
| 5 | HAROHALLI | 08027562030 |

Deputy Director
Department Of Women And Child Development
Ramanagara Dist, Ramanagara.

ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್ ರಾಮನಗರ
(ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

ಸಂಖ್ಯೆ: ಉನಿರಾ/ಮಮಅ/ಅಂಕಾಸಆಯ್ಕೆ/Online/2017-18

ಉಪನಿರ್ದೇಶಕರ ಕಛೇರಿ
ಪಂಚಾಯತ್ ಭವನ, 2ನೇ ಮಹಡಿ
ಬಿ.ಎಂ ರಸ್ತೆ, ರಾಮನಗರ ಜಿಲ್ಲೆ,
ದಿನಾಂಕ: 20-02-2018

## Calendar Of Events

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.

| ದಿನಾಂಕ | ದಿನ | ವಿವರ |
|---|---|---|
| 23-02-2018 | – | ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ |
| 20-03-2018 | – | ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ |
| 21.03.2018 ರಿಂದ 24.03.2018 ರವರೆಗೆ | 4 ದಿನ | ಆಯ್ಕೆ ಸಮಿತಿ ಸದಸ್ಯರು ಹಾಗು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಎನ್.ಐ.ಸಿಯಲ್ಲಿ ಪರಿಶೀಲನೆ |
| 26-03-2018 ರಿಂದ 27-03-2018 ರವರೆಗೆ | 2 ದಿನ | ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು |
| 28-03-2018 ರಿಂದ 04-04-2018 ರವರೆಗೆ | 8 ದಿನ | ಅಭ್ಯರ್ಥಿಗಳಿಂದ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ |
| 05-04-2018 ರಿಂದ 07-04-2018 ರವರೆಗೆ | 3 ದಿನ | ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ |
| 11-04-2018 ರಿಂದ 13-04-2018 ರವರೆಗೆ | 3 ದಿನ | ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ರಾಮನಗರ ಜಿಲ್ಲೆ, ರಾಮನಗರ.

| Abstract | | | | | | |
|---|---|---|---|---|---|---|
| Sl. No | ICDS Project | AWW Nos | Mini AWW Nos | AWH Nos | Total No of Vacancies | Remarks |
| 1 | Ramanagara | 4 | 3 | 26 | 33 | - |
| 2 | Channapatna | 2 | 1 | 8 | 11 | - |
| 3 | Magadi | 4 | 3 | 13 | 20 | - |
| 4 | Kanakapura | 18 | 3 | 16 | 37 | - |
| 5 | Harohalli | 2 | - | 14 | 16 | - |
| Total | | 30 | 10 | 77 | 117 | - |

Deputy Director
Women And Child Development
Ramanagar Dist, Ramanagara

## Women And Child Development Department Ramanagar District,Ramanagara

### Anganwadi Workers Vacancy Details

| Sl.no | Anganwadi Centre name | Grama Panchayath / Ward no. | Reserved for ( SC/ST/Others) | ICDS Project |
|---|---|---|---|---|
| 1 | Bhadrapura | Manchanayakanahalli | SC | Ramanagara |
| 2 | Juttanapalya(mini) | Manchanayakanahalli | Others | Ramanagara |
| 3 | Dhoddasulikere | Lakshmipura | Others | Ramanagara |
| 4 | Bethangere | Bannikuppe(Bi) | Others | Ramanagara |
| 5 | Chikka Byramangala(mini) | Byramangala | Others | Ramanagara |
| 6 | Yarab Nagara-4 | Ward No.24 | Others | Ramanagara |
| 7 | Bidikarmikara Colony-3(mini) | Ward No.24 | Others | Ramanagara |
| 8 | Garakahalli-2 | Harokoppa | Others | Channapatna |
| 9 | Jeevanapuramohalla-2 | Ward No 28 | Others | Channapatna |
| 10 | Gollallidoddi (mini) | Rampura | Others | Channapatna |
| 11 | Mallappanahalli (Mini) | Srigiripura | Others | Magadi |
| 12 | Kanakenahalli Laya (Mini) | Bittasandra | Others | Magadi |
| 13 | Benappanapalya (Mini) | Chikkamudigere | Others | Magadi |
| 14 | Shambudaevanahalli | Madabal | Others | Magadi |
| 15 | Mattikere gollarahatti | Mattikere | Others | Magadi |
| 16 | Kottaganahalli | Gudemaranahalli | Others | Magadi |
| 17 | Adarangi A | Adarangi | SC | Magadi |
| 18 | Kolagondanahalli-1 | Kolagondanahalli | Others | Kanakapura |
| 19 | Alagadakalu | Kolagondanahalli | Others | Kanakapura |
| 20 | Beemagondanahalli | Hosadurga | Others | Kanakapura |
| 21 | Salabanni | Hosadurga | Others | Kanakapura |
| 22 | Anajawadi | Chikkamuduvadi | Others | Kanakapura |
| 23 | Chikkenahalli | Chikkamuduvadi | Others | Kanakapura |
| 24 | Halehonniganadoddi | Allimaranahalli | Others | Kanakapura |
| 25 | Bachallidoddi | Allimaranahalli | SC | Kanakapura |
| 26 | Hunasemaradadoddi | Allimaranahalli | Others | Kanakapura |
| 27 | Rayasandra | Thungani | Others | Kanakapura |
| 28 | Dimbadahalli | Bannimukkodlu | Others | Kanakapura |
| 29 | T. Bekuppe | T. Bekuppe | Others | Kanakapura |
| 30 | Chikkondanahalli | Hunasanahalli | SC | Kanakapura |
| 31 | Hegganuru | Uyyamballi | Others | Kanakapura |
| 32 | Thenganayakanahalli | Choodahalli | SC | Kanakapura |
| 33 | Sambegowdanadoddi | Arekattedoddi | Others | Kanakapura |
| 34 | Kurupete-2 | Ward No.21 | Others | Kanakapura |
| 35 | I P P Hospital | Ward No.9, 10, 11 | Others | Kanakapura |
| 36 | Donganidoddi (Mini ) | Ward No. 16 | SC | Kanakapura |
| 37 | Maralipura (Mini ) | Bannimukkodlu | Others | Kanakapura |
| 38 | Madivala (Mini ) | Uyyamballi | ST | Kanakapura |
| 39 | Gullahattikaval | Kaggalahalli | SC | Harohalli |
| 40 | Annaedoddi | Koliganahalli | Others | Harohalli |

Deputy Director
Women And Child Development
Ramanagar Dist, Ramanagara

| Women And Child Development Department Ramanagar District,Ramanagara | | | | |
|---|---|---|---|---|
| **Anganwadi Helper Vacancy Posts Information** | | | | |
| Sl.no | Anganwadi Centre name | Grama Panchayath / Ward no. | Reserved for ( SC/ST/Others) | ICDS Project |
| 1 | Chikkakuntanahalli | Byramangala | Others | Ramanagara |
| 2 | Gollarapalya | Manchanayakanahalli | Others | Ramanagara |
| 3 | Billakempanahalli | Manchanayakanahalli | Others | Ramanagara |
| 4 | Ningegowdanadoddi | Manchanayakanahalli | Others | Ramanagara |
| 5 | Kenchanakuppe-2 | Bidadi Purasabe | SC | Ramanagara |
| 6 | Hallimala | Harisandra | SC | Ramanagara |
| 7 | Heggadagere | Bidadi Purasabe | Others | Ramanagara |
| 8 | Kenjigarahalli | Mayaganahalli | SC | Ramanagara |
| 9 | Katmandoddi | Sugganahalli | Others | Ramanagara |
| 10 | Kavanapura | Kailancha | Others | Ramanagara |
| 11 | Rangarayaradoddi | Ward No.31 | Others | Ramanagara |
| 12 | Yarab Nagara-5 | Ward No.24 | Others | Ramanagara |
| 13 | Mehabhubnagara-3 | Ward No.19 | Others | Ramanagara |
| 14 | Naganakatte | Ward No.30 | Others | Ramanagara |
| 15 | Vinayakanagara | Ward No.02 | Others | Ramanagara |
| 16 | Vijayanagara | Ward No.02 | SC | Ramanagara |
| 17 | Maruthinagara | Ward No.02 | Others | Ramanagara |
| 18 | Gandinagara-1 | Ward No.03 | SC | Ramanagara |
| 19 | Gejalagudde-2 | Ward No.30 | Others | Ramanagara |
| 20 | Nalbandwadi | Ward No.14 | Others | Ramanagara |
| 21 | Archakarahalli-2 | Ward No.31 | Others | Ramanagara |
| 22 | Bidikarmikara Colony-3 | Ward No.24 | Others | Ramanagara |
| 23 | Chikkasulikere | Lakshmipura | Others | Ramanagara |
| 24 | Veeregowdanadoddi | Doddagangavadi | Others | Ramanagara |
| 25 | Kempegowdanadoddi | Harisandra | Others | Ramanagara |
| 26 | Maedanahalli | Bidadhi Purasabae | Others | Ramanagara |
| 27 | Saraguru-2 | Iggaluru | Others | Channapatna |
| 28 | Honganuru-1 | Honganuru | Others | Channapatna |
| 29 | Beedicolony 2 | Ward No 29 | Others | Channapatna |
| 30 | Yarabnagara-2 | Ward No 20 | Others | Channapatna |
| 31 | Mehadinagara(Mallaiahnadoddi) | Vandaraguppe | Others | Channapatna |
| 32 | B.V.Palya | B.V.Halli | Others | Channapatna |
| 33 | Nagavara-1 | Nagavara | Others | Channapatna |
| 34 | Mutturayanagudipalya | Belagumba | Others | Magadi |
| 35 | Donakuppe | Sathanoor | Others | Magadi |
| 36 | K.V Mata | Hanchikkuppe | SC | Magadi |
| 37 | Hosapete A | Ward No. | Others | Magadi |
| 38 | H.H.G Palya | Kalari Kaval | Others | Magadi |
| 39 | Kalyagate A | Ward No.17&15 | Others | Magadi |
| 40 | Kadaraiahnapalya | Belagumba | Others | Magadi |
| 41 | Hosur | Motaganahalli | Others | Magadi |
| 42 | Palyadahalli | Tippasandra | Others | Magadi |
| 43 | Hulikatte | Agalakote | Others | Magadi |
| 44 | Tirumale B | Purasabe | Others | Magadi |
| 45 | Sankigatta | Sankigatta | Others | Magadi |
| 46 | Naganahalli | Kannuru | Others | Magadi |
| 47 | Chakanahalli | Chakanahalli | Others | Kanakapura |
| 48 | Neralahallidoddi | Mullahalli | Others | Kanakapura |
| 49 | Alanatha | Bannimukkodlu | SC | Kanakapura |
| 50 | Kabbalaianadoddi | Bannimukkodlu | SC | Kanakapura |

| | | | | |
|---|---|---|---|---|
| 51 | Chikkenahalli | Chikkamuduvadi | Others | Kanakapura |
| 52 | Anajawadi | Chikkamuduvadi | Others | Kanakapura |
| 53 | Kadahalli | Kadahalli | Others | Kanakapura |
| 54 | Baradanahalli | Booduguppe | Others | Kanakapura |
| 55 | Chikkabettahalli | Narayanapura | Others | Kanakapura |
| 56 | Kabbalu | Kabbalu | Others | Kanakapura |
| 57 | Yaluvalli | Choodahalli | Others | Kanakapura |
| 58 | Kurubarahalli | Choodahalli | Others | Kanakapura |
| 59 | Jakkegowdanadoddi | Achalu | Others | Kanakapura |
| 60 | Nallahalli | Nallahalli | Others | Kanakapura |
| 61 | Kodipura | Kodihalli | Others | Kanakapura |
| 62 | Halasuru | Arakere | Others | Kanakapura |
| 63 | Harohalli-1 | Harohalli | Others | Harohalli |
| 64 | Cheeluru | Cheeluru | Others | Harohalli |
| 65 | T Bannikuppe | Cheeluru | Others | Harohalli |
| 66 | Hullisidegowdanadoddi | Cheeluru | Others | Harohalli |
| 67 | T Maniyambal | Banavasi | Others | Harohalli |
| 68 | Billaganakuppe | Banavasi | Others | Harohalli |
| 69 | A Rampura | Dyavasandra | Others | Harohalli |
| 70 | Doddabaijjalahatti | Yalachavadi | Others | Harohalli |
| 71 | Dodduru | Yalachavadi | Others | Harohalli |
| 72 | Puradoddi | T Hosahalli | Others | Harohalli |
| 73 | Kaggalahalli | Kaggalahalli | Others | Harohalli |
| 74 | Muninagara | Kaggalahalli | SC | Harohalli |
| 75 | Kadasikoppa | Kolliganahalli | Others | Harohalli |
| 76 | Doddamaralavadi-1 | Doddamaralavadi | Others | Harohalli |
| 77 | J.Byadarahalli | Jagadapura | Others | Channapatna |

Deputy Director
Women And Child Development
Ramanagar Dist, Ramanagara

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಂಗನವಾಡಿ ಕಾರ್ಯಕರ್ತೆಯರ / ಸಹಾಯಕಿಯರ ಆಯ್ಕೆ ಮಾಡಲು ಹೊರಡಿಸಿದ ಮಾರ್ಗಸೂಚಿಗಳು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ:ಮಮಇ 237 ಐಸಿಡಿ 2012 ದಿನಾಂಕ:15.06.2012
2) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:ಡಿಡಬ್ಲ್ಯೂಸಿ/ಐಸಿಡಿ/ಎಎನ್‌ಜಿ/1/95/2013-14, ದಿನಾಂಕ:[illegible]2014

**ಪ್ರಸ್ತಾವನೆ:**

ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಆಯ್ಕೆ ಮಾಡಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:15.06.2012ರ ಆದೇಶದಲ್ಲಿ ರಚಿಸಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು.

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಲಾದ ಮಾರ್ಗಸೂಚಿಗಳನ್ನು ಪರಿಷ್ಕರಿಸಲು ಪ್ರಸ್ತಾಪಿಸಿ, ಅರ್ಹತೆಯ ಮಾನದಂಡಗಳಲ್ಲಿ ಕೆಲವೊಂದು ಬದಲಾವಣೆಗಳನ್ನು ತರಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:22.02.2014ರ ಪತ್ರದಲ್ಲಿ ಕೋರಿರುತ್ತಾರೆ.

ಆದುದರಿಂದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಆಯ್ಕೆ ಮಾಡಲು ಹೊರಡಿಸಿರುವ ಮಾರ್ಗಸೂಚಿಗಳನ್ನು ಪರಿಷ್ಕರಿಸಲು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

## ಆದೇಶ ಸಂಖ್ಯೆ: ಮಮಇ 89 ಐಸಿಡಿ 2014, ದಿನಾಂಕ:19.04.2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಆಯ್ಕೆ ಮಾಡಲು ದಿನಾಂಕ:15.06.2012ರ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಂತೆ ಪರಿಷ್ಕರಿಸಿ, ಆದೇಶಿಸಿದೆ.

2..

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರನ್ನು ಆಯ್ಕೆ ಮಾಡಲು ಈ ಆದೇಶಕ್ಕೆ ಲಗತ್ತಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

T. Krishnaiah
(ಟಿ.ಕೃಷ್ಣಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ್ರ)
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 500 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂ:5329, ಬೆಂಗಳೂರು-01.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು
6. ಆಯ್ಕೆ ಸಮಿತಿಯ ಎಲ್ಲಾ ಸದಸ್ಯರುಗಳು
7. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು / ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ:3 ರಿಂದ 7 ನಿರ್ದೇಶಕರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ. ಬೆಂಗಳೂರು.
3) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5) ಸರ್ಕಾರದ ಉಪ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕಿ.

ಸರ್ಕಾರಿ ಆದೇಶ ಸಂಖ್ಯೆ:ಮಮಇ 89 ಐಸಿಡಿ 2014 ದಿನಾಂಕ:19.04.2014 ರ ಅನುಬಂಧ

# ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರನ್ನು ಆಯ್ಕೆ ಮಾಡಲು ಪರಿಷ್ಕರಿಸಿದ ಮಾರ್ಗಸೂಚಿಗಳು ಮತ್ತು ಅರ್ಹತೆಯ ಮಾನದಂಡಗಳು.

## I ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಅರ್ಹತೆ ಮಾನದಂಡಗಳು:-

1) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಲು 18-35 ವರ್ಷ ವಯೋಮಿತಿ ಯೊಳಗಿರಬೇಕು.
2) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಸ್ಥಳೀಯರಾಗಿರಬೇಕು.
3) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದ 6 ತಿಂಗಳೊಳಗೆ ಸಂಬಂಧಪಟ್ಟ ತಹಶೀಲ್ದಾರ ರಿಂದ ಪಡೆದ ಮೂಲ ವಾಸಸ್ಥಳದ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
4) ವಿದ್ಯಾರ್ಹತೆ:

   ಅಂಗನವಾಡಿ ಕಾರ್ಯಕರ್ತೆ: ಎಸ್.ಎಸ್.ಎಲ್.ಸಿ. ತೇರ್ಗಡೆ. ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

   ಅಂಗನವಾಡಿ ಸಹಾಯಕಿ:

   - ಕನಿಷ್ಠ 4ನೇ ತರಗತಿ ತೇರ್ಗಡೆ, ಗರಿಷ್ಠ 9ನೇ ತರಗತಿ ತೇರ್ಗಡೆ. ಇದರಲ್ಲಿ ಹೆಚ್ಚಿನ ವಿದ್ಯಾರ್ಹತೆಯುಳ್ಳವರನ್ನು ಆಯ್ಕೆ ಮಾಡಬೇಕು. 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.
   - ಒಂದೇ ವಿದ್ಯಾರ್ಹತೆಯುಳ್ಳ ಒಂದಕ್ಕಿಂತ ಹೆಚ್ಚು ಅರ್ಜಿ ಬಂದಿದ್ದಲ್ಲಿ ಹೆಚ್ಚು ಅಂಕಗಳಿಸಿದವರನ್ನು ಆಯ್ಕೆ ಮಾಡಬೇಕು.

5) ಕರ್ನಾಟಕ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜಶಾಸ್ತ್ರ / ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು, ಪ್ರಮಾಣ ಪತ್ರ / ಅಂಕಪಟ್ಟಿಯು ಗರಿಷ್ಠ 625, ಕನಿಷ್ಠ 219 ಅಂಕಗಳನ್ನು ಹೊಂದಿದಲ್ಲಿ, ಅಂತಹ ಅಭ್ಯರ್ಥಿಗಳನ್ನು ಪರಿಗಣಿಸತಕ್ಕದ್ದು. Open
6) ಬೇರೆ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದು, ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸತಕ್ಕದ್ದು.
7) ಅಂಗನವಾಡಿ ಕಾರ್ಯಕರ್ತೆಯರು ಶಾಲಾ ಪೂರ್ವ ಶಿಕ್ಷಣವನ್ನು ಹಾಗೂ ದಾಖಲೆಗಳನ್ನು ಕನ್ನಡದಲ್ಲಿ ನಿರ್ವಹಿಸಬೇಕಾಗಿರುವುದರಿಂದ ಅಭ್ಯರ್ಥಿಗಳು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹ ಅವರು ಕನ್ನಡ ಭಾಷೆಯನ್ನು ಓದುವ, ಬರೆಯುವ ಮತ್ತು ಮಾತನಾಡುವ ಜ್ಞಾನವಿರಬೇಕು. ಕನ್ನಡವನ್ನು ಒಂದು ಭಾಷೆಯಾಗಿ ಕಡ್ಡಾಯವಾಗಿ ವ್ಯಾಸಂಗ ಮಾಡಿರಬೇಕು. ಕನ್ನಡವನ್ನು ಮೂರನೇ ಭಾಷೆಯಾಗಿ ವ್ಯಾಸಂಗ ಮಾಡಿದ್ದು ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ

ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಕನಿಷ್ಠ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರ ಆಯ್ಕೆಯನ್ನು ಮಾಡುವ ಬಗ್ಗೆ ಸಮಿತಿಯವರೇ ನಿರ್ಧರಿಸಬಹುದಾಗಿದೆ.

8) ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆದ ಹಾಲಿ/ಮಾಜಿ ನಿವಾಸಿಗಳು ಅರ್ಜಿ ಸಲ್ಲಿಸಿದಾಗ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸಿದೆ ನೇರವಾಗಿ ಅವರನ್ನೇ ಆಯ್ಕೆ ಮಾಡತಕ್ಕದ್ದು. ಆದರೆ ಸ್ಥಳೀಯರು, ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

9) ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ, ಆದ್ಯತೆ ಮೇರೆಗೆ ಅವರನ್ನು ಆಯ್ಕೆ ಮಾಡತಕ್ಕದ್ದು. ಆದರೆ ಸ್ಥಳೀಯರು, ನಿಗದಿತ ವಿದ್ಯಾರ್ಹತೆ ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

10) ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದು, ಆಯ್ಕೆಯಾಗುವ ಸಂಭವವಿದ್ದಲ್ಲಿ, ಆಯ್ಕೆ ಪಟ್ಟಿ ಪ್ರಕಟಿಸುವ ಮುನ್ನ ಚುನಾಯಿತ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ರಾಜೀನಾಮೆ ಅಂಗೀಕೃತ ಪತ್ರ ನೀಡಬೇಕಾಗಿರುವುದು ಕಡ್ಡಾಯ. ಅಂದರೆ ಯಾವುದಾದರೂ ಒಂದು ಸ್ಥಾನದಲ್ಲಿ ಮಾತ್ರ ಕೆಲಸ ನಿರ್ವಹಿಸಲು ಅವಕಾಶವಿದೆ.

## II ಅಂಗನವಾಡಿ ಕೇಂದ್ರಗಳ ವ್ಯಾಪ್ತಿ ಗುರ್ತಿಸುವ ಬಗ್ಗೆ:-

1) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಗೌರವಸೇವೆಗೆ ಸೇರಿದ್ದು, ಮೀಸಲಾತಿ ತತ್ವಗಳು ಅನ್ವಯಿಸುವುದಿಲ್ಲ. ಅಂಗನವಾಡಿ ಕೇಂದ್ರ ಪ್ರಾರಂಭಿಸುವ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ / ನಗರ ಪ್ರದೇಶದ ಕಂದಾಯ ವಾರ್ಡ್‌ನ ಒಟ್ಟು ಜನಸಂಖ್ಯೆಯು ಶೇಕಡ 40ಕ್ಕಿಂತ ಹೆಚ್ಚು ಪರಿಶಿಷ್ಟ ಜಾತಿ ಹಾಗೂ ಶೇಕಡ 40 ಕ್ಕಿಂತ ಹೆಚ್ಚು ಪರಿಶಿಷ್ಟ ವರ್ಗದವರನ್ನು ಒಳಗೊಂಡಿದ್ದ ಸಂದರ್ಭದಲ್ಲಿ ಈ ವರ್ಗಗಳ ಪೈಕಿ ಅತೀ ಹೆಚ್ಚು ಜನಸಂಖ್ಯೆಯಿರುವ ವರ್ಗದವರಿಗೆ ಕಾರ್ಯಕರ್ತೆ /ಸಹಾಯಕಿಯ ಹುದ್ದೆಯನ್ನು ನಿಗದಿಪಡಿಸಿ ಪ್ರಕಟಣೆ ಹೊರಡಿಸಬೇಕು. ಪ್ರಕಟಣೆಯಲ್ಲಿ ಸ್ಪಷ್ಟವಾಗಿ ಯಾವ ವರ್ಗದವರಿಗೆ ಹುದ್ದೆಯನ್ನು ನಿಗದಿಪಡಿಸಲಾಗಿದೆಯೆಂದು ಸೂಚಿಸಬೇಕು. ನಿಗದಿಪಡಿಸಿದ ವರ್ಗದವರನ್ನೇ ಆಯ್ಕೆ ಮಾಡಬೇಕು.

2) 25% ಕ್ಕಿಂತ ಹೆಚ್ಚು ಅಲ್ಪಸಂಖ್ಯಾತ ಜನಸಂಖ್ಯೆಯಿರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ ಉರ್ದು ಭಾಷೆ ಬಲ್ಲವರನ್ನು ಕಾರ್ಯಕರ್ತೆ / ಸಹಾಯಕಿಯ ಹುದ್ದೆಗೆ ಆಯ್ಕೆ ಮಾಡಬಹುದಾಗಿದೆ.

3) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ಕಾರ್ಯಕರ್ತೆ / ಸಹಾಯಕಿ ಹುದ್ದೆ ನಿಗದಿಪಡಿಸಿದ ಅಂಗನವಾಡಿ ಕೇಂದ್ರಗಳಲ್ಲಿ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದಿದ್ದಲ್ಲಿ ಮರು ಪ್ರಕಟಣೆಯನ್ನು 7 ದಿವಸಗಳೊಳಗೆ ಹೊರಡಿಸಿ, ಪುನ: ಅರ್ಜಿಗಳನ್ನು ಆಹ್ವಾನಿಸಬೇಕು. ಆಗಲೂ ನಿಗದಿತ ವರ್ಗದವರಿಂದ ಅರ್ಜಿಗಳು ಬಾರದೇ ಹೋದಲ್ಲಿ ಪುನ: 10 ದಿವಸಗಳೊಳಗೆ ಪ್ರಕಟಣೆ ಹೊರಡಿಸಿ ಇತರೆ ವರ್ಗದವರಿಂದ ಅರ್ಜಿ ಆಹ್ವಾನಿಸಿ ಆಯ್ಕೆ ಮಾಡಬಹುದಾಗಿದೆ.

4) ಒಂದು ಗ್ರಾಮದಲ್ಲಿ ಒಂದಕ್ಕಿಂತ ಹೆಚ್ಚು ಅಂಗನವಾಡಿ ಕೇಂದ್ರ ಪ್ರಾರಂಭಿಸುತ್ತಿದ್ದು, ಆ ಕೇಂದ್ರಗಳಿಗೆ ಸಂಬಂಧಪಟ್ಟ ಗ್ರಾಮ / ವಾರ್ಡ್‌ರವರಿಂದ ಮಾತ್ರ ಅರ್ಜಿಗಳನ್ನು ಆಹ್ವಾನಿಸಬೇಕು. ಒಂದು ಪಕ್ಷ ಆ ಗ್ರಾಮ / ವಾರ್ಡ್‌ರವರಿಂದ ಅರ್ಜಿಗಳು ಸ್ವೀಕೃತವಾಗದೇ ಹೋದಲ್ಲಿ 7 ದಿವಸಗಳೊಳಗೆ ಮರುಪ್ರಕಟಣೆ ಹೊರಡಿಸಬೇಕು. ಎರಡನೆಯ ಬಾರಿಯೂ ಸ್ಥಳೀಯರಿಂದ ಅರ್ಜಿ ಸ್ವೀಕೃತವಾಗದಿದ್ದಲ್ಲಿ ಪುನ: 10

ದಿವಸಗಳೊಳಗೆ ಪ್ರಕಟಣೆ ಹೊರಡಿಸಿ ಅತ್ಯಂತ ಸಮೀಪದ ಗ್ರಾಮ / ವಾರ್ಡ್‌ನ ಅರ್ಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಬಹುದಾಗಿದೆ.

5) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗಾಗಿ ಎರಡನೇ ಬಾರಿಗೆ ಯಾವುದೇ ಮರು ಪ್ರಕಟಣೆ ಹೊರಡಿಸುವ ಮುನ್ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸ್ವತ: ಗ್ರಾಮ / ವಾರ್ಡ್‌ಗೆ ಭೇಟಿ ನೀಡಿ ಆ ವರ್ಗದ / ಗ್ರಾಮದ / ವಾರ್ಡ್‌ನ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲವೆಂಬ ಬಗ್ಗೆ ಸ್ಥಳ ಪರಿಶೀಲನಾ ವರದಿ ಪಡೆದುಕೊಂಡಿರಬೇಕು.

6) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗಾಗಿ ಪ್ರಕಟಣೆಯನ್ನು ಸ್ಪಷ್ಟ / ನಿಖರವಾಗಿ ಹೊರಡಿಸತಕ್ಕದ್ದು. ಹುದ್ದೆ ಖಾಲಿಯಿರುವ ಸ್ಥಳ, ಆ ಹುದ್ದೆ ಜನಸಂಖ್ಯೆ ಆಧಾರದಲ್ಲಿ ಯಾವ ವರ್ಗಕ್ಕೆ ನಿಗದಿಪಡಿಸಲಾಗಿದೆ ಎಂಬ ಬಗ್ಗೆ ತಿಳಿಸಿ, ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸತಕ್ಕದ್ದು. ಪ್ರಕಟಣೆಯನ್ನು ಗ್ರಾಮದ ಕೃಷಿ ಸಂಪರ್ಕ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಲೆ, ಗ್ರಾಮ ಲೆಕ್ಕಿಗರ ಕಛೇರಿ, ಅಂಗನವಾಡಿ ಕಟ್ಟಡ, ಗ್ರಾಮ ಪಂಚಾಯತ್ ಕಛೇರಿ ಕಟ್ಟಡ ಹಾಗೂ ಇನ್ನಿತರ ಸಾರ್ವಜನಿಕ ಸ್ಥಳಗಳಲ್ಲಿ ಸೂಚನಾ ಫಲಕದ ಮೇಲೆ ಪ್ರದರ್ಶಿಸತಕ್ಕದ್ದು. ಪ್ರಕಟಣೆ ಹೊರಡಿಸಿದ ದಿನಾಂಕದಿಂದ 25 ದಿನಗಳೊಳಗೆ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ನಿಗದಿಪಡಿಸಿರತಕ್ಕದ್ದು ಹಾಗೂ ಪ್ರಕಟಣೆಯ ಪ್ರತಿಯನ್ನು ಆಯ್ಕೆ ಸಮಿತಿಯ ಎಲ್ಲಾ ಸದಸ್ಯರಿಗೂ ಕಳುಹಿಸತಕ್ಕದ್ದು.

7) ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಆಯ್ಕೆಗೆ ಸಂಬಂಧಿಸಿದ ಅಂಗನವಾಡಿ ಕೇಂದ್ರದ ಗ್ರಾಮಾಂತರ ಪ್ರದೇಶದ ಕಂದಾಯ ಗ್ರಾಮ ಹಾಗೂ ನಗರ ಪ್ರದೇಶದ ಕಂಧಾಯ ವಾರ್ಡ್‌ಗಳನ್ನು ಪರಿಗಣಿಸಬೇಕು. ಚುನಾವಣಾ ವಾರ್ಡ್‌ಗಳನ್ನು ಪರಿಗಣಿಸುವಂತಿಲ್ಲ.

8) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕ ಗಳಿಸಿದ್ದಲ್ಲಿ ವಯೋಹಿರಿಯರನ್ನು ಪರಿಗಣಿಸಬೇಕು.

9) ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿಯಾದ / ಹೊಸ ಕೇಂದ್ರಕ್ಕೆ ಅರ್ಹ ಸಹಾಯಕಿಯರಿಂದ ಕಾರ್ಯಕರ್ತೆ ಹುದ್ದೆ ಕೋರಿ ಅರ್ಜಿ ಸ್ವೀಕೃತವಾಗಿದ್ದಲ್ಲಿ, ಅವರನ್ನೇ ಆಯ್ಕೆ ಮಾಡತಕ್ಕದ್ದು. ಅಂತಹ ಯಾವುದೇ ಅರ್ಜಿಗಳು ಸ್ವೀಕೃತವಾಗಿಲ್ಲದಿದ್ದಲ್ಲಿ, ಸ್ಥಾನಪಲ್ಲಟ ಕೋರಿ ಬಂದಿರುವ ಅರ್ಜಿಗಳನ್ನು ಪರಿಗಣಿಸುವುದು. ಸ್ಥಾನಪಲ್ಲಟ ಕೋರಿ ಯಾವುದೇ ಅರ್ಜಿಗಳು ಸ್ವೀಕೃತವಾಗಿಲ್ಲದಿದ್ದಲ್ಲಿ ಹೊಸದಾಗಿ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಿ ಗರಿಷ್ಠ 2 ತಿಂಗಳೊಳಗೆ ಮುಗಿಸತಕ್ಕದು.

10) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಗಾಗಿ ಅರ್ಜಿಯ ನಮೂನೆ, ಒದಗಿಸಬೇಕಾದ ದಾಖಲೆಗಳ ಬಗ್ಗೆ ಪ್ರಕಟಣೆಯಲ್ಲಿ ಸ್ಪಷ್ಟವಾಗಿ ತಿಳಿಸತಕ್ಕದ್ದು. ಅರ್ಜಿಗಳನ್ನು ಯೋಜನಾ ಕಛೇರಿಯಿಂದ ವಿತರಿಸುವ ಅಗತ್ಯವಿಲ್ಲ. ಅರ್ಜಿ ಸ್ವೀಕೃತವಾದ ಕೂಡಲೇ, ಸ್ವೀಕೃತಿ ವಹಿಯಲ್ಲಿ ದಾಖಲಿಸಿಕೊಂಡು, ನಿರ್ದಿಷ್ಟ ಕ್ರಮ ಸಂಖ್ಯೆ ಮತ್ತು ದಿನಾಂಕವನ್ನು ನಮೂದಿಸಿ ಶಿಶು ಅಭಿವೃದ್ಧಿ ಯೋಜನಾ ಕಛೇರಿಯಲ್ಲಿ ಇಟ್ಟಿರತಕ್ಕಂತಹ ಟೆಂಡರ್ ಪೆಟ್ಟಿಗೆಯಲ್ಲಿ ಹಾಕಬೇಕು. ಅರ್ಜಿ ಸ್ವೀಕರಿಸುವ ಅಂತಿಮ ದಿನದ ಸಂಜೆ 5.30 ಗಂಟೆಗೆ ಟೆಂಡರ್ ಪೆಟ್ಟಿಗೆಯನ್ನು ಮುಚ್ಚಿ ದೃಢೀಕರಿಸುವುದು.

## III ಅಂಗನವಾಡಿ ಸಹಾಯಕಿಯರನ್ನು ಕಾರ್ಯಕರ್ತೆಯರನ್ನಾಗಿ ಆಯ್ಕೆ ಮಾಡುವ ಬಗ್ಗೆ:

1) ಅಂಗನವಾಡಿ ಕಾರ್ಯಕರ್ತೆ ಹುದ್ದೆ ಖಾಲಿಯಿರುವ / ಹೊಸ ಕೇಂದ್ರ ಪ್ರಾರಂಭಿಸುತ್ತಿರುವ ಗ್ರಾಮದಲ್ಲಿ ವಾಸಿಸುತ್ತಿರುವ ಸಹಾಯಕಿಯರಿದ್ದು, ಅವರು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿದ್ದು, ಕನಿಷ್ಠ 3 ವರ್ಷ ಸೇವೆ ಸಲ್ಲಿಸಿದ್ದು, 45 ವರ್ಷ ವಯೋಮಿತಿಯೊಳಗಿದ್ದು, ಆ ಅಂಗನವಾಡಿ ಕೇಂದ್ರದಿಂದ 3 ಕಿ.ಮೀ. ವ್ಯಾಪ್ತಿಯೊಳಗೆ ವಾಸಿಸುತ್ತಿದ್ದು, ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ ಆ ಅಂಗನವಾಡಿ ಕೇಂದ್ರಕ್ಕೆ ಕಾರ್ಯಕರ್ತೆ ಹುದ್ದೆಗೆ ಬೇರೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಪ್ರಮೇಯವಿರುವುದಿಲ್ಲ. ಸದರಿ ಸಹಾಯಕಿಯನ್ನೇ ಕಾರ್ಯಕರ್ತೆ ಹುದ್ದೆಗೆ ಆಯ್ಕೆ ಮಾಡತಕ್ಕದ್ದು. ಈ ಬಗ್ಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಯ್ಕೆ ಸಮಿತಿಯ ಅಧ್ಯಕ್ಷರಿಗೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮೋದನೆ ಪಡೆದು ಆದೇಶ ಹೊರಡಿಸತಕ್ಕದ್ದು.

2) ಒಂದೇ ಗ್ರಾಮದಲ್ಲಿ ಇಬ್ಬರು ಎಸ್.ಎಸ್.ಎಲ್.ಸಿ ಪಾಸಾದ ಅರ್ಹ ಸಹಾಯಕಿಯರಿದ್ದು, ಅರ್ಜಿ ಸಲ್ಲಿಸಿದಲ್ಲಿ ಅವರ ಸೇವಾಹಿರಿತನವನ್ನು ಪರಿಗಣಿಸುವುದು.

## IV) ವಿಧವೆಯರ ಆಯ್ಕೆ:-

1) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಹುದ್ದೆಗಳಿಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ನೇರವಾಗಿ ವಿಧವೆಯರನ್ನೇ ಆಯ್ಕೆ ಮಾಡತಕ್ಕದ್ದು. ಆದರೆ ಎಸ್.ಎಸ್.ಎಲ್.ಸಿ ಉತ್ತೀರ್ಣ, ಸ್ಥಳೀಯರು ಮತ್ತು ವಯೋಮಿತಿಯೊಳಗಿರಬೇಕಾಗಿರುವುದು ಕಡ್ಡಾಯ. ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸುವಂತಿಲ್ಲ.

2) ವಿಧವೆಯರು ತಾವು ಪ್ರಸ್ತುತ ಎಲ್ಲಿ ವಾಸವಿರುವುದಾಗಿ, ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುತ್ತಾರೆ, ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸತಕ್ಕದ್ದು.

3) ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಬಹುದಾಗಿದೆ.

4) ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದವರಿಗೆ ಕಾರ್ಯಕರ್ತೆ / ಸಹಾಯಕಿ ಹುದ್ದೆ ನಿಗದಿಪಡಿಸಿದ ಕೇಂದ್ರಗಳಲ್ಲಿ ಆ ವರ್ಗಕ್ಕೆ ಸೇರಿದ ವಿಧವೆಯರು ಅರ್ಜಿ ಸಲ್ಲಿಸಿದಲ್ಲಿ ಮಾತ್ರ ಮೇಲಿನ ಕಂಡಿಕೆಯಲ್ಲಿ ತಿಳಿಸಿದಂತೆ ವಿಧವೆಯರನ್ನೇ ಆಯ್ಕೆ ಮಾಡಬೇಕು. ಬೇರೆ ವರ್ಗದ ವಿಧವೆಯರು ಅರ್ಜಿ ಸಲ್ಲಿಸಿದ ಪಕ್ಷದಲ್ಲಿ ಪರಿಗಣಿಸುವ ಅವಶ್ಯಕತೆಯಿರುವುದಿಲ್ಲ.

## V) ಅಂಗವಿಕಲರ ಆಯ್ಕೆ:-

1) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಹುದ್ದೆಗಳಿಗೆ ಅಂಗವಿಕಲರು ಅರ್ಜಿ ಸಲ್ಲಿಸಿದಾಗ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೆ ನೇರವಾಗಿ ಅಂಗವಿಕಲರನ್ನೇ ಆಯ್ಕೆ ಮಾಡತಕ್ಕದ್ದು. ಆದರೆ ಅಂಗವಿಕಲ ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಉತ್ತೀರ್ಣ, ಸ್ಥಳೀಯರು ಮತ್ತು ವಯೋಮಿತಿಯೊಳಗೆ ಇರಬೇಕಾಗಿರುವುದು ಕಡ್ಡಾಯ.

2) ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಾಗಿರುವುದಾಗಿ ವಾಸಸ್ಥಳ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೋ ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸತಕ್ಕದ್ದು.

3) ಅಂಗನವಾಡಿ ಕಾರ್ಯಕರ್ತೆ ಹುದ್ದೆಯಲ್ಲಿ 3-6 ವರ್ಷ ಮಕ್ಕಳಿಗೆ ಆಟ ಮತ್ತು ಅಭಿನಯ ಗೀತೆಗಳ ಮೂಲಕ ಶಾಲಾ ಪೂರ್ವ ಶಿಕ್ಷಣವನ್ನು ನೀಡಲಾಗುತ್ತಿದ್ದು ಚಟುವಟಿಕೆ ವೇಳೆಯಲ್ಲಿ ಮಕ್ಕಳನ್ನು ಹಿಡಿದೆತ್ತಿ ನಿಲ್ಲಿಸಲು ಹಾಗೂ ಅಭಿನಯ ಮಾಡಿ ತೋರಿಸಬೇಕಾಗಿರುತ್ತದೆ. ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿ ನಿರ್ವಹಿಸಬೇಕಾಗಿರುತ್ತದೆ. ಆದ ಕಾರಣ ಕಿವುಡರು ಮತ್ತು ಮೂಕರು, ಕುರುಡರು, ಬುದ್ಧಿ ಮಾಂದ್ಯರು, ಮಾನಸಿಕ ಅಸ್ವಸ್ಥರು ಕಾರ್ಯಕರ್ತೆ ಹುದ್ದೆಗೆ ಅರ್ಹರಲ್ಲ.

4) ಇತರೆ ದೈಹಿಕ ಶೇ.60 ಮೀರದಂತೆ ಅಂಗವೈಕಲ್ಯತೆಯುಳ್ಳವರು ಅರ್ಜಿ ಸಲ್ಲಿಸಬಹುದಾಗಿದೆ. ಅಂಗೀಕೃತ ಪ್ರಾಧಿಕಾರ (ಜಿಲ್ಲಾ ವೈದ್ಯಕೀಯ ಮಂಡಳಿ) ದಿಂದ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಾಗಿದ್ದಾರೆಂಬುದರ ಬಗ್ಗೆ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಹಾಜರುಪಡಿಸಬೇಕು.[[

5) ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆಮಾಡುವ ಸಂದರ್ಭದಲ್ಲಿ ಆ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ಸೂಚಿಸಿ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವ ಬಗ್ಗೆ ಸಮಿತಿಯೇ ಪರಿಶೀಲಿಸಿ ನಿರ್ಧರಿಸತಕ್ಕದ್ದು.

6) ಒಂದೇ ಹುದ್ದೆಗೆ ಇಬ್ಬರು ಅಂಗವಿಕಲರು ಅರ್ಜಿ ಸಲ್ಲಿಸಿದ್ದಲ್ಲಿ ಗರಿಷ್ಠ ಅಂಕ ಪಡೆದವರನ್ನು ಆಯ್ಕೆ ಮಾಡಬಹುದಾಗಿದೆ.

7) ಅಂಗನವಾಡಿ ಸಹಾಯಕಿಯ ಹುದ್ದೆಯಲ್ಲಿ ಅಂಗನವಾಡಿ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಬೇಯಿಸಿ / ಸಿದ್ಧಪಡಿಸಿ ಉಣಬಡಿಸುವುದು, ಕೇಂದ್ರವನ್ನು ಸ್ವಚ್ಛಗೊಳಿಸುವುದು, ಮಕ್ಕಳನ್ನು ಅವರ ಮನೆಗಳಿಂದ ಕೇಂದ್ರಕ್ಕೆ ಕರೆತರುವುದು ಹಾಗೂ ಕಾರ್ಯಕರ್ತೆಯು ವೃತ್ತಸಭೆ, ತಾಯಂದಿರ ಸಭೆ ಮತ್ತು ಮನೆ ಭೇಟಿಗೆ ಹೋದಾಗ ಅಂಗನವಾಡಿ ಕೇಂದ್ರದ ಜವಾಬ್ದಾರಿಯನ್ನು ನಿರ್ವಹಿಸಬೇಕು. ಆದ್ದರಿಂದ ಸಹಾಯಕಿ ಹುದ್ದೆಗೆ ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

8) ಒಂದು ವೇಳೆ ಒಂದೇ ಕೇಂದ್ರಕ್ಕೆ ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು, ಬಾಲನ್ಯಾಯ ಕಾಯ್ದೆಯಡಿ ಇಲಾಖೆಯ ಸಂಸ್ಥೆಗಳಲ್ಲಿ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಆಶ್ರಯ ಪಡೆದ ಹಾಲಿ / ಮಾಜಿ ನಿವಾಸಿಗಳು, ವಿಧವೆಯರು ಹಾಗೂ ಅಂಗವಿಕಲರು ಅರ್ಜಿ ಸಲ್ಲಿಸಿದ್ದಲ್ಲಿ, ಆಸಿಡ್ ದಾಳಿಗೆ ತುತ್ತಾದ ಮಹಿಳೆಯರಿಗೆ ಪ್ರಥಮ ಆದ್ಯತೆ, ಇಲಾಖೆಯ ಸಂಸ್ಥೆಗಳು ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ಹಾಲಿ / ಮಾಜಿ ನಿವಾಸಿಗಳಿಗೆ ಎರಡನೇ ಆದ್ಯತೆ, ವಿಧವೆಯರಿಗೆ ಮೂರನೇ ಆದ್ಯತೆ ಹಾಗೂ ಅಂಗವಿಕಲರಿಗೆ ನಾಲ್ಕನೇ ಆದ್ಯತೆ ನೀಡುವುದು.

VI) ಬೋನಸ್ ಅಂಕಗಳು:- (ಅಂಗನವಾಡಿ ಕಾರ್ಯಕರ್ತೆ /ಸಹಾಯಕಿಯರಿಗೆ)

1) ಮಾಜಿ ದೇವದಾಸಿಯರು,
2) ಯೋಜನಾ ನಿರಾಶ್ರಿತರು,
3) ವಿಚ್ಛೇದಿತ ಮಹಿಳೆಯರು,
4) ಪರಿತ್ಯಕ್ತೆಯರು

ಹೆಚ್ಚಿನ 5 ಬೋನಸ್ ಅಂಕಗಳಿಗೆ ಅರ್ಹರಾಗಿರುತ್ತಾರೆ. ಪ್ರತಿ ವಿನಾಯಿತಿಗೂ 5 ಬೋನಸ್ ಅಂಕ ನೀಡುವುದು. ಆದರೆ ಯಾವುದೇ ಕಾರಣಕ್ಕೂ ಶೇಕಡಾ 5(5%) ಅಂಕ ನೀಡುವಂತಿಲ್ಲ. ಉದಾ:ಒಬ್ಬ ಅಭ್ಯರ್ಥಿಯು ನಿರಾಶ್ರಿತರು, ಪರಿತ್ಯಕ್ತೆ, ಮಾಜಿ ದೇವದಾಸಿ, ವಿಚ್ಛೇದಿತರು ಆಗಿದ್ದಲ್ಲಿ ಪ್ರತಿ ವಿನಾಯಿತಿಗೂ 5

ಬೋನಸ್ ಅಂಕಗಳನ್ನು ನೀಡುವುದು. ಅಂದರೆ ಸದರಿಯವರ ನಿಗದಿತ ವಿದ್ಯಾರ್ಹತೆಯ ಅಂಕಗಳಿಗೆ ನಿರಾಶ್ರಿತರಿಗೆ 5+, ಪರಿತ್ಯಕ್ತೆಗೆ 5+, ಮಾಜಿ ದೇವದಾಸಿ 5+, ವಿಚ್ಛೇದಿತರಿಗೆ 5+, ಒಟ್ಟು 20 ಬೋನಸ್ ಅಂಕಗಳನ್ನು ನೀಡುವುದು. ಬೋನಸ್ ಅಂಕ ಪಡೆಯಲು ಸಂಬಂಧಿತ ದಾಖಲೆಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕಾಗಿರುವುದು ಕಡ್ಡಾಯ

## VII) ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:-

1) ಅರ್ಜಿ ನಿಗದಿತ ನಮೂನೆಯಲ್ಲಿ.
2) ಜನನ ಪ್ರಮಾಣ ಪತ್ರ / ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕ ಪಟ್ಟಿ
3) ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ
4) ತಹಶೀಲ್ದಾರರಿಂದ ಪಡೆದ 6 ತಿಂಗಳ ಒಳಗಿನ ವಾಸಸ್ಥಳ ದೃಢೀಕರಣ ಪತ್ರ.
5) ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6) ಅಂಗನವಾಡಿ ಸಹಾಯಕಿಯಾಗಿ ಸೇವೆ ಸಲ್ಲಿಸಿದ ಬಗ್ಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪ್ರಮಾಣ ಪತ್ರ.
7) ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ).
8) ಅಂಗವಿಕಲತೆ ಪ್ರಮಾಣ ಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ).
9) ವಿಚ್ಛೇಧನ ಪ್ರಮಾಣ ಪತ್ರ.
10) ಮಾಜಿ ದೇವದಾಸಿ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
11) ಪರಿತ್ಯಕ್ತೆ ಬಗ್ಗೆ ಗ್ರಾಮಪಂಚಾಯ್ತಿಯಿಂದ ಪಡೆದ ಪ್ರಮಾಣ ಪತ್ರ.
12) ಸಂಸ್ಥೆಯ ನಿವಾಸಿ ಬಗ್ಗೆ ಇಲಾಖೆ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13) ಯೋಜನಾ ನಿರಾಶ್ರಿತರ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

## VIII) ಆಯ್ಕೆ ವಿಧಾನ:-

1) ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ಮುಂದಿನ ಕೆಲಸದ ದಿನ ಸಮಿತಿ ಸಭೆ ಸೇರಬೇಕು.
2) ಆಯ್ಕೆ ಸಮಿತಿಯ ಎಲ್ಲಾ ಸದಸ್ಯರು ಹಾಜರಾಗಲು ಸಾಧ್ಯವಾಗದಂತಹ ಅನಿವಾರ್ಯ ಕಾರಣಗಳಿದ್ದಲ್ಲಿ ಕನಿಷ್ಠ 2/3 ರಷ್ಟು ಸದಸ್ಯರು ಕಡ್ಡಾಯವಾಗಿ ಹಾಜರಿರಬೇಕು.
3) ಟೆಂಡರ್ ಪೆಟ್ಟಿಗೆಯಲ್ಲಿ ಹಾಕಿದ್ದ ಎಲ್ಲಾ ಅರ್ಜಿಗಳನ್ನು ಅಂದೇ ಪರಿಶೀಲಿಸುವುದು.
4) ಅರ್ಜಿಯೊಂದಿಗೆ ಯಾವುದೇ ಅಗತ್ಯ ದಾಖಲೆಗಳನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಅರ್ಜಿಗಳ ಬಗ್ಗೆ ದೃಢೀಕರಿಸಿ ತಿರಸ್ಕರಿಸುವುದು.
5) ಸ್ವೀಕೃತವಾದ ಅರ್ಜಿಗಳನ್ನು ವಿದ್ಯಾರ್ಹತೆಯಲ್ಲಿ ಪಡೆದ ಅಂಕ ಮತ್ತು ಬೋನಸ್ ಅಂಕಗಳನ್ನು ಒಳಗೊಂಡಂತೆ ಪಡೆದ ಒಟ್ಟು ಅಂಕಗಳಿಗನುಸಾರವಾಗಿ ಕ್ರೋಢೀಕೃತ ಪಟ್ಟಿಯನ್ನು ಹಾಗೂ ಸಕಾರಣದೊಂದಿಗೆ ತಿರಸ್ಕೃತ ಅರ್ಜಿ ಪಟ್ಟಿಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಿದ್ದಪಡಿಸಿ, ಆಯ್ಕೆ ಸಮಿತಿಯ ಮುಂದೆ ಮಂಡಿಸಬೇಕು. ಅಭ್ಯರ್ಥಿಗಳ ಪಟ್ಟಿಯನ್ನು ಅರ್ಹತೆ ಮತ್ತು ಮೆರಿಟ್‌ಗನುಸಾರವಾಗಿ ಪರಿಶೀಲಿಸಿ ಹೆಚ್ಚು ಅಂಕ

ಪಡೆದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಅಂದೇ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

6) ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಲು ಒಂದು ವಾರ (7 ದಿನಗಳು) ಕಾಲಾವಕಾಶ ನೀಡುವುದು ಹಾಗೂ ಕಾಲಾವಕಾಶ ಮುಗಿದ ಮುಂದಿನ ಕೆಲಸದ ದಿನವೇ ಸಮಿತಿಯ ಸಭೆ ಕರೆದು ಆಕ್ಷೇಪಣೆಗಳು ಸ್ವೀಕೃತವಾದಲ್ಲಿ ಅವುಗಳನ್ನು ಕ್ರೋಢೀಕರಿಸಿ ಚರ್ಚಿಸಿ ಕಾರ್ಯಕರ್ತೆ / ಸಹಾಯಕಿಯರ ಅಂತಿಮ ಆಯ್ಕೆಪಟ್ಟಿಯನ್ನು ಅಂದೇ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

7) ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಕಂಡು ಬಂದಲ್ಲಿ ನೇಮಕಾತಿ ಪ್ರಾಧಿಕಾರವೇ ಚರ್ಚಿಸಿ ನಿಯಮಾನುಸಾರ ಕ್ರಮವಹಿಸುವುದು.

8) ಆಯ್ಕೆ ನಡವಳಿ ಪುಸ್ತಕದಲ್ಲಿ ಆಯ್ಕೆ ಸಮಿತಿಗೆ ಹಾಜರಾದ ಎಲ್ಲಾ ಸದಸ್ಯರ ಹಾಜರಾತಿ ಪಡೆಯುವುದು. ಆಯ್ಕೆ ಪ್ರಕ್ರಿಯೆ ಮುಗಿದ ನಂತರ ನಡವಳಿಗಳನ್ನು ಸವಿವರ (speaking order) ವಾಗಿ,ಕೇಂದ್ರವಾರು ಆಯ್ಕೆಯಾದ ಅಭ್ಯರ್ಥಿಗಳ ಹೆಸರುಗಳನ್ನು ಯಾವ ಮಾನದಂಡಗಳನ್ವಯ ಆಯ್ಕೆ ಮಾಡಲಾಗಿದೆ ಎಂಬ ಷರಾದೊಂದಿಗೆ ನಡವಳಿಯಲ್ಲಿ ದಾಖಲಿಸಿ ಯಾವುದೇ ತಿದ್ದುಪಡಿಗಳಿದ್ದಲ್ಲಿ ಸಕಾರಣದೊಂದಿಗೆ ದೃಢೀಕರಿಸಿ ಹಾಜರಿರುವ ಆಯ್ಕೆ ಸಮಿತಿಯ ಎಲ್ಲಾ ಸದಸ್ಯರ ಸಹಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

9) ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಾಗಿ ಕಾರ್ಯನಿರ್ವಹಿಸಲು ನೇಮಕಾತಿ ಆದೇಶಗಳನ್ನು ಹೊರಡಿಸಬೇಕು.

10) ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯ ಹುದ್ದೆಯು ಸಂಪೂರ್ಣವಾಗಿ ಗೌರವ ಸೇವೆಯಾಗಿದ್ದು, ಖಾಯಂ ಹುದ್ದೆಯಲ್ಲವೆಂದು ನೇಮಕಾತಿ ಆದೇಶದಲ್ಲಿ ತಿಳಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ವರದಿ ಮಾಡಿಕೊಳ್ಳುವ ಸಮಯದಲ್ಲಿ ಮೂಲ ದಾಖಲಾತಿಗಳು, ವೈದ್ಯಕೀಯ ಪ್ರಮಾಣ ಪತ್ರ (ಫಿಟ್‌ನೆಸ್ ಸರ್ಟಿಫಿಕೇಟ್) ಗಳನ್ನು ಹಾಜರುಪಡಿಸಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪರಿಶೀಲಿಸಿ ವರದಿ ಮಾಡಿಸಿಕೊಳ್ಳತಕ್ಕದ್ದು.

## IX) <u>ಶಿಸ್ತು ಪ್ರಾಧಿಕಾರ:-</u>

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಕಾರ್ಯನಿರ್ವಹಣೆಯಲ್ಲಿ ಯಾವುದೇ ನ್ಯೂನತೆಗಳ ಬಗ್ಗೆ, ಸ್ಥಳೀಯವಾಗಿ ವಾಸಿಸುತ್ತಿಲ್ಲದಿರುವ ಬಗ್ಗೆ ದೂರುಗಳು ಸ್ವೀಕೃತಗೊಂಡಲ್ಲಿ, ಅವುಗಳನ್ನು ಪರಿಶೀಲಿಸಿ ಇವರನ್ನು ಸೇವೆಯಿಂದ ವಜಾಗೊಳಿಸುವ ಅಧಿಕಾರವು ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ ಹಾಗೂ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಇರುತ್ತದೆ.

T. Krishnaiah

(ಟಿ.ಕೃಷ್ಣಯ್ಯ)

ಸರ್ಕಾರದ ಅಧೀನ ಕಾರ್ಯದರ್ಶಿ-I (ಪ್ರ)

ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಕರ್ನಾಟಕ ಸರ್ಕಾರ

ಸಂ:ಮಮಅಇ/ಐಸಿಡಿಎಸ್/ಎಎಸ್‌ಜೆ-1/44/2017-18

ನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಡಾ:ಅಂಬೇಡ್ಕರ್ ವೀಧಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11-01-2018

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
30 ಜಿಲ್ಲೆಗಳು.

ಮಾನ್ಯರೆ,

ವಿಷಯ: ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆ ಮಾರ್ಗಸೂಚಿಗಳಿಗೆ ಸಂಬಂಧಿಸಿದಂತೆ.

ಉಲ್ಲೇಖ:1) ಸರ್ಕಾರದ ಆದೇಶ ಸಂ:ಮಮಇ 303 ಐಸಿಡಿ 2017 ದಿ:23.09.2017
2) ಸರ್ಕಾರದ ಸೇರ್ಪಡೆ ಆದೇಶ ಸಂ:ಮಮಇ 27 ಐಸಿಡಿ 2017 ದಿ:01.12.2017
3)ಈ ಕಛೇರಿಯ ಸಮಸಂಖ್ಯೆ ಪತ್ರ ದಿ: 29-12-2017

---

ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಆಯ್ಕೆಯನ್ನು ಆನ್- ಲೈನ್ ಮುಖಾಂತರ ನಿರ್ವಹಿಸಲು ಅನುವಾಗುವಂತೆ ಅಂಗನವಾಡಿ ಕಾರ್ಯಕರ್ತೆಯರ / ಸಹಾಯಕಿಯರ ಆಯ್ಕೆ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸರ್ಕಾರದಿಂದ ಉಲ್ಲೇಖಿತ (1) ರ ಆದೇಶವನ್ನು ಹೊರಡಿಸಲಾಗಿದೆ.

ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಳಲ್ಲಿ ವಿಕಲಚೇತನರಿಗೆ 10 ವರ್ಷ ವಯೋಮಿತಿ ಸಡಿಲಿಕೆ ನೀಡಿ ಸರ್ಕಾರದಿಂದ ಉಲ್ಲೇಖಿತ (2) ರ ಆದೇಶವನ್ನು ಹೊರಡಿಸಲಾಗಿದೆ.

ಉಲ್ಲೇಖಿತ (3) ರ ಪತ್ರದಲ್ಲಿ, ತಂತ್ರಾಂಶವನ್ನು ಅಳವಡಿಸುವವರೆಗೆ ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಾಗಿ ಆನ್- ಲೈನ್‌ನಲ್ಲಿ ಅರ್ಜಿಯನ್ನು ಕರೆಯಬಾರದೆಂದು ಹಾಗೂ ಸದರಿ ಆದೇಶವು ದಿ:01.12.2017 ರಿಂದ ಜಾರಿಗೆ ಬಂದಿರುವುದರಿಂದ ದಿ:01.12.2017 ರ ನಂತರ ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಿ ಪ್ರಕಟಣೆ ಹೊರಡಿಸಿದ್ದಲ್ಲಿ ಅದನ್ನು ಸ್ಥಗಿತಗೊಳಿಸಲು ಸೂಕ್ತ ಕ್ರಮ ವಹಿಸಲು ತಿಳಿಸಲಾಗಿದ್ದ ಪತ್ರವನ್ನು ಹಿಂಪಡೆಯಲಾಗಿದೆ.

ಇನ್ನು ಮುಂದೆ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳನ್ನು ತುಂಬಲು ಅರ್ಜಿ ಆಹ್ವಾನಿಸಿ ಪ್ರಕಟಣೆಗಳನ್ನು ಹೊರಡಿಸುವಾಗ ಉಲ್ಲೇಖಿತ (2) ರ ಆದೇಶವನ್ನು ಪಾಲಿಸಲು ತಿಳಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

ಪ್ರತಿಯನ್ನು: ಜಿಲ್ಲಾ ಯೋಜನೆಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು. ಇವರ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ